ಪದವಿ ಪೂರ್ವ ಕಾಲೇಜುಗಳಲ್ಲಿ ಯುವ ಸಂಸತ್ತು ರಚನೆ ಬಗ್ಗೆ

127 (222) ಶ್ರೀ ವಸಂತ ಬಂಗೇರ ಕೆ. (ಬೆಳ್ತಂಗಡಿ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಮಾನ್ಯತೆ ಪಡೆದ ಎಷ್ಟು ಪದವಿ ಪೂರ್ವ ಕಾಲೇಜುಗಳಲ್ಲಿ ಯುವ ಸಂಸತ್ ಸ್ಪರ್ಧೆಯನ್ನು ವ್ಯವಸ್ಥೆಗೊಳಿಸುವುದಕ್ಕಾಗಿ 2009–10 ಮತ್ತು 2010–11ರಲ್ಲಿ ಎಷ್ಟು ಮೊತ್ತವನ್ನು ಬಿಡುಗಡೆ ಗೊಳಿಸಲಾಗಿದೆ; (ವಿವರ ನೀಡುವುದು);

ಆ) ಈ ಸ್ಪರ್ಧೆಯ ವ್ಯವಸ್ಥೆಗಾಗಿ ಬಿಡುಗಡೆಯಾದ ಅನುದಾನದಲ್ಲಿ ಎಷ್ಟು ಅನುದಾನ ಖರ್ಚಾಗಿರುತ್ತದೆ? (ಜಿಲ್ಲಾವಾರು ವಿವರ ನೀಡುವುದು);

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) 2009–10 ಮತ್ತು 2010–11ನೇ ಸಾಲಿನಲ್ಲಿ ಯುವ ಸಂಸತ್ ಸ್ಪರ್ಧೆಯನ್ನು ವ್ಯವಸ್ಥೆಗೊಳಿಸುವುದಕ್ಕಾಗಿ ಪದವಿ ಪೂರ್ವ ಕಾಲೇಜುಗಳಿಗೆ ಯಾವುದೇ ಅನುದಾನವನ್ನು ಬಿಡುಗಡೆ ಮಾಡಿರುವುದಿಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಪದವಿ ಪೂರ್ವ ಕಾಲೇಜುಗಳಿಗೆ ಗೌರವಧನ ಆದಾರದ ಮೇಲೆ ನೇಮಕ

128 (223) ಶ್ರೀ ವಸಂತ ಬಂಗೇರ ಕೆ. (ಬೆಳ್ತಂಗಡಿ): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) 2010–11ರ ಸಾಲಿನಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರುಗಳ ಹುದ್ದೆಗಳಿಗೆ ಎಷ್ಟು ಮಂದಿಯನ್ನು ಗೌರವಧನ ಆಧಾರದಲ್ಲಿ ನೇಮಿಸಿಕೊಳ್ಳಲಾಗಿದೆ;

ಆ) ಗೌರವ ಧನಕ್ಕಾಗಿ ಎಷ್ಟು ಮೊತ್ತವನ್ನು ಈವರೆಗೆ ಬಿಡುಗಡೆ ಗೊಳಿಸಲಾಗಿದೆ; (ಜಿಲ್ಲಾವಾರು ವಿವರ ನೀಡುವುದು);